ಜನಾಂಗಕ್ಕೆ ಮೀಸಲು ಸ್ಥಾನಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗಿದೆಯೇ?

ಉ) ಹಾಗಿದ್ದಲ್ಲಿ ಇದುವರೆಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):-

ಅ) ಹೌದು.

ಆ) ಹೌದು.

ಇ) ಪರಿಶೀಲಿಸಲಾಗುತ್ತಿದೆ.

ಈ) ಹೌದು.

ಉ) ರಾಜ್ಯಚುನಾವಣಾ ಆಯೋಗವು ಗ್ರಾಮ ಪಂಚಾಯ್ತಿಗಳಲ್ಲಿ ತೆರವಾಗುವ ಸ್ಥಾನಗಳನ್ನು ತುಂಬಲು ಕಾಲಕಾಲಕ್ಕೆ ಚುನಾವಣೆ ನಡೆಸುತ್ತಿದೆ.

ವಿಷಯ:- ಕೊಡಗಿನ ಸರ್ಕಾರಿ ಜಿಲ್ಲಾ ಆಸ್ಪತ್ರೆಯಲ್ಲಿ ಖಾಲಿ ಇರತಕ್ಕ ವೈದ್ಯರ ಹುದ್ದೆಗಳನ್ನು ಭರ್ತಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 140 (501)

ಶ್ರೀ ಶ್ರೀ ಡಿ.ಎಸ್.ಮಾದಪ್ಪ (ಮಡಿಕೇರಿ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲಾ ಕೇಂದ್ರದಲ್ಲಿರುವ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು? ಹಾಗೂ ಮಹಿಳಾ ವೈದ್ಯರ ಖಾಲಿ ಹುದ್ದೆಗಳೆಷ್ಟು?

ಆ) ಈ ಖಾಲಿ ಹುದ್ದೆಗಳನ್ನು ತುಂಬಲು ಕೈಗೊಂಡಿರುವ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಸರ್ಕಾರಿ ಜಿಲ್ಲಾ ಆಸ್ಪತ್ರೆ, ಕೊಡಗು, ಇಲ್ಲಿಗೆ ಒಟ್ಟು 22 ವೈದ್ಯರ ಹುದ್ದೆಗಳು (ಹಿರಿಯ ತಜ್ಞರು) ಮಂಜೂರಾಗಿದ್ದು, 5 ಹುದ್ದೆಗಳು ಖಾಲಿ ಇವೆ. ಜಿಲ್ಲಾ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರ ಹುದ್ದೆಯೆಂದು ಮಂಜೂರಾಗಿರುವುದಿಲ್ಲ. ಮೂರು ಪ್ರಸೂತಿ ತಜ್ಞರ ಹುದ್ದೆ ಇದ್ದು ಎರಡು ಹುದ್ದೆ ಭರ್ತಿಯಾಗಿವೆ. ಖಾಲಿ ಇರುವ 5 ಹುದ್ದೆಗಳ ಪೈಕಿ ಒಂದು ಪ್ರಸೂತಿ ತಜ್ಞರ ಹುದ್ದೆ ಖಾಲಿ ಇರುತ್ತದೆ.

ಆ) ಈ ಖಾಲಿ ಹುದ್ದೆಗಳನ್ನು ಸೇವಾನಿರತ ವೈದ್ಯರುಗಳು ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಂದ ಮತ್ತು ವೈದ್ಯರುಗಳಿಗೆ ಪದೋನ್ನತಿ ನೀಡಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಶ್ರೀ ಶಂಕರನಾರಾಯಣ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎ. ವಿಭಾಗದಲ್ಲಿ ಕನ್ನಡ ಐಚ್ಛಿಕ ವಿಷಯವನ್ನು ಆರಂಭಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 141 (269)

ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀ ಶಂಕರನಾಯಾಯಣ ಪ್ರಥಮ ದರ್ಜೆ ಕಾಲೇಜಿನ ಬಿ.ಎ. ವಿಭಾಗದಲ್ಲಿ ಕನ್ನಡ ಐಚ್ಛಿಕ ವಿಷಯವನ್ನು ಆರಂಭಿಸಲು ಸರ್ಕಾರವು ಯಾವ ಕ್ರಮ ತೆಗೆದುಕೊಳ್ಳಲಾಗಿದೆ.

ಆ) ಈ ಬಗ್ಗೆ ಮನವಿ ಬಂದಿರುವುದು ನಿಜವೇ?

ಶ್ರೀ ಬಿ.ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

ಅ) ಮಂಗಳೂರು ವಿಶ್ವವಿದ್ಯಾಲಯದಿಂದ ಪ್ರಸ್ತಾವನೆ ಬಂದಿರುವುದಿಲ್ಲ. ಪ್ರಸ್ತಾವನೆ ಬಂದಲ್ಲಿ, ಪರಿಶೀಲಿಸಲಾಗುವುದು.

ಆ) ನಿಜ. (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿಯವರಿಂದಲೇ ಪತ್ರ ಬಂದಿದೆ).

ವಿಷಯ:- ಕುಂದಾಪುರ ತಾಲ್ಲೂಕಿನ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 142 (274)

ಶ್ರೀ ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕುಂದಾಪುರ ತಾ: ಶಂಕರನಾರಾಯಣ, ಬಿದ್ಕಾಲ್ ಕಟ್ಟೆ ಮತ್ತು ಸಿದ್ದಾಪುರದ ಪ್ರೌಢಶಾಲೆಗಳಲ್ಲಿ 8, 9, ಮತ್ತು 10ನೇ ತರಗತಿಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಡಿವಿಜನ್ ಮಾಡುವ ವಿಷಯವು ಸರ್ಕಾರದ ಮುಂದಿದೆಯೇ?

ಶ್ರೀ ಹೆಚ್.ಸಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ)	ಶಂಕರನಾರಾಯಣ	ಬಿದ್ಕಲ್	ಸಿದ್ದಾಪುರ
	8ನೇ 2-57	2-66	1-121
	ತರಗತಿ 56	66	